# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಕೆ.ಎ.ತಿಪ್ಪೇಸ್ವಾಮಿ**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 62**

**ಉತ್ತರಿಸಬೇಕಾದ ದಿನಾಂಕ : 04.07.2023**

**ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು ಕೇಂದ್ರದಲ್ಲಿ ಪ್ರತ್ಯೇಕ ಸಹಕಾರಿ ಸಚಿವಾಲಯ ಸೃಜಿಸಿರುವುದರಿಂದ ರಾಜ್ಯದಲ್ಲಿನ ಸಹಕಾರಿ ಕ್ಷೇತ್ರ ವಿಸ್ತರಣೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಕೇಂದ್ರ ಸರ್ಕಾರದ ಪ್ರತ್ಯೇಕ ಸಹಕಾರಿ ಸಚಿವಾಲಯದ ಸಹಯೋಗದೊಂದಿಗೆ ರಾಜ್ಯದ ಸಹಕಾರ ಇಲಾಖೆಯಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಕಾರ್ಯಕ್ರಮಗಳು ಹಾಗೂ ಇದರಿಂದ ರಾಜ್ಯದ ಜನತೆಗಾಗುವ ಉಪಯೋಗಗಳ ವಿವರವನ್ನು ಕೆಳಕಂಡಂತೆ ನೀಡಲಾಗಿದೆ.<br><br>• **ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಗಣಕೀಕರಣ ಯೋಜನೆ.**<br><br>ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಮುಂದಿನ ಮೂರು ವರ್ಷಗಳಲ್ಲಿ ರಾಜ್ಯದ 6040 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಪ್ರತೀ ಸಂಘಕ್ಕೆ ರೂ.3.91 ಲಕ್ಷಗಳಂತೆ ಒಟ್ಟು 236.00 ಕೋಟಿಗಳ ವೆಚ್ಚದಲ್ಲಿ ಗಣಕೀಕರಣಗೊಳಿಸಿ ರೈತರಿಗೆ ಮತ್ತು ಗ್ರಾಮೀಣ ಭಾಗದ ಗ್ರಾಹಕರಿಗೆ ಉತ್ತಮ ಸೇವೆಯನ್ನು ನೀಡಲು ಉದ್ದೇಶಿಸಲಾಗಿದ್ದು, ಏಕರೂಪದ ತಂತ್ರಾಂಶ ಮತ್ತು ತರಬೇತಿಯ ಪೂರ್ಣ ವೆಚ್ಚ ರೂ.43.00 ಕೋಟಿಗಳನ್ನು ಕೇಂದ್ರ ಸರ್ಕಾರ ಮತ್ತು ನಬಾರ್ಡ್ ಭರಿಸಲಿದ್ದು, ಉಳಿದ ಮೊತ್ತ ರೂ.193.00 ಕೋಟಿಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರ ಶೇ: 60:40 ರ ಪ್ರಮಾಣದಲ್ಲಿ ಭರಿಸಲಿದ್ದು, ರಾಜ್ಯ ಸರ್ಕಾರ ಪಾಲು ರೂ.77.00 ಕೋಟಿಗಳಾಗಿರುತ್ತದೆ.<br><br>ಮೊದಲನೇ ಹಂತದಲ್ಲಿ 5491 ಪ್ಯಾಕ್ಸ್‌ಗಳನ್ನು ಗಣಕೀಕರಣಗೊಳಿಸಲು ಕೇಂದ್ರ ಸರ್ಕಾರದಿಂದ ರೂ.40.25 ಕೋಟಿ ಮತ್ತು ರಾಜ್ಯ ಸರ್ಕಾರದಿಂದ ರೂ.26.84 ಕೋಟಿ ಹೀಗೆ ಒಟ್ಟು ರೂ.67.09 ಕೋಟಿಗಳನ್ನು ಮೊದಲನೇ ಕಂತಿನಲ್ಲಿ ಬಿಡುಗಡೆ ಮಾಡಲಾಗಿದೆ. |

| | | |
|---|---|---|
| | | • **National Cooperative data base ತಂತ್ರಾಂಶದಲ್ಲಿ ಸಹಕಾರ ಸಂಘಗಳ ಮಾಹಿತಿಯನ್ನು ಅಳವಡಿಸುವುದು.**<br><br>ಸಹಕಾರ ಮಂತ್ರಾಲಯ, ಕೇಂದ್ರ ಸರ್ಕಾರ **'ಸಹಕಾರ್ ಸೆ ಸಮೃದ್ಧಿ'** ಧ್ಯೇಯದೊಂದಿಗೆ ಸಹಕಾರ ಕ್ಷೇತ್ರದ ಬೆಳವಣಿಗೆಯಲ್ಲಿ ಇರುವ ತೊಡಕುಗಳನ್ನು ನಿವಾರಿಸಲು ಮತ್ತು ಸಾಮರ್ಥ್ಯವನ್ನು ಗುರುತಿಸಲು ಎಲ್ಲಾ ಸಹಕಾರ ಸಂಘಗಳ ಮಾಹಿತಿಯನ್ನು ಒಂದೆಡೆ ಕ್ರೋಢೀಕರಿಸಲು National Cooperative data base ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಈ ಯೋಜನೆಯಲ್ಲಿ ರಾಜ್ಯ ಸರ್ಕಾರದ ಸಹಕಾರ ಇಲಾಖೆಯು ಭಾಗವಹಿಸಿದ್ದು, ಮೊದಲನೇ ಹಂತದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು , ಹಾಲು ಉತ್ಪಾದಕ ಸಹಕಾರ ಸಂಘಗಳು ಹಾಗೂ ಮೀನುಗಾರರ ಸಹಕಾರ ಸಂಘಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಅಳವಡಿಸಲು ಕ್ರಮವಹಿಸಲಾಗಿದೆ. ಎರಡನೇ ಹಂತದಲ್ಲಿ ಗೃಹ ನಿರ್ಮಾಣ ಸಹಕಾರ ಸಂಘಗಳು, T.A.P.C.M.S. ಹಾಗೂ ಇತರೆ ಸಹಕಾರ ಸಂಘಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಅಳವಡಿಸಲು ಕ್ರಮವಹಿಸಲಾಗುತ್ತಿದ್ದು, ಈ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.<br><br>• **ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಮಾಡೆಲ್ ಬೈಲಾ ಒದಗಿಸುವುದು.**<br><br>ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಬಹುಪಯೋಗಿ ಕಾರ್ಯಚಟುವಟಿಕೆಯನ್ನು ಕೈಗೊಂಡು ಗ್ರಾಮೀಣ ಭಾಗದ ಸದಸ್ಯರಿಗೆ ಎಲ್ಲಾ ಬಗೆಯ ಸೇವೆಗಳನ್ನು ಒದಗಿಸಲು ಅನುಕೂಲವಾಗುವಂತೆ ಕೇಂದ್ರ ಸರ್ಕಾರವು ಮಾದರಿ ಬೈಲಾವನ್ನು ಒದಗಿಸಿದ್ದು, ರಾಜ್ಯದಲ್ಲಿನ ಸಹಕಾರ ಕಾಯ್ದೆಯಲ್ಲಿನ ಅಂಶಗಳನ್ನು ಇದಕ್ಕೆ ಸೂಕ್ತವಾಗಿ ಅಳವಡಿಸಿ ಪ್ಯಾಕ್ಸ್‌ಗಳ ಬೈಲಾಗೆ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ.<br><br>• **ಆತ್ಮನಿರ್ಭರ್ ಯೋಜನೆಯಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಬಹುಪಯೋಗಿ ಸೇವಾ ಕೇಂದ್ರಗಳನ್ನಾಗಿ ಪರಿವರ್ತನೆ.** |

| | | |
|---|---|---|
| | | ನಬಾರ್ಡ್ ಯೋಜನೆಯಡಿ ಪ್ಯಾಕ್ಸ್‌ಗಳನ್ನು ಬಹುಪಯೋಗಿ ಕೇಂದ್ರಗಳನ್ನಾಗಿ ಪರಿವರ್ತಿಸಲು ಶೇ.4ರ ಬಡ್ಡಿ ದರದಲ್ಲಿ ಪುನರ್ಧನ ನೀಡಲಾಗುತ್ತಿದೆ.<br><br>ಕೇಂದ್ರ ಸರ್ಕಾರದ ಆತ್ಮ ನಿರ್ಭರ್ ಯೋಜನೆಯ ಭಾಗವಾದ Agri Infra Fund ಯೋಜನೆಯಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ರೈತರ ಜಮೀನಿನ ಸಮೀಪ ಕೊಯ್ಲೋತ್ತರ ಸಂಸ್ಕರಣೆಗಾಗಿ ಘಟಕಗಳನ್ನು ಸ್ಥಾಪಿಸಲು ಉದಾ: ಗೋದಾಮು ನಿರ್ಮಾಣ, ಶೀತಲಗೃಹ ನಿರ್ಮಾಣ, ಕೊಯ್ಲೋತ್ತರ ಸಂಸ್ಕರಣೆ, ರೈತರ ಸೇವಾ ಕೇಂದ್ರ, ಕೃಷಿ ಪರಿಕರಗಳನ್ನು ಸರಬರಾಜು ಮಾಡುವ, ಸಾಗಾಣಿಕೆಗೆ ಸೌಕರ್ಯ ಕಲ್ಪಿಸುವ ಸಲುವಾಗಿ ಸಾಲ ನೀಡಿದಲ್ಲಿ ಶೇ.3ರ ಬಡ್ಡಿದರದಲ್ಲಿ ಸಹಾಯಧನ ನೀಡಲಾಗುತ್ತಿದೆ.<br><br>ಕರ್ನಾಟಕ ರಾಜ್ಯದಲ್ಲಿ ಈ ಎರಡೂ ಯೋಜನೆಗಳನ್ನು ಸಂಯೋಜಿಸಿ 1549 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಯೋಜನೆ ಲಾಭ ಪಡೆಯಲು ಗುರಿ ನಿಗದಿಪಡಿಸಿದ್ದು, ಇದುವರೆಗೆ 1082 ಪ್ಯಾಕ್ಸ್ ಗಳು ಅರ್ಜಿ ಸಲ್ಲಿಸಿದ್ದು, ನಬಾರ್ಡ್ 933 ಸಂಘಗಳಿಗೆ ರೂ.322.77 ಕೋಟಿಗಳ ಸಾಲವನ್ನು ಶೇ.4ರ ಬಡ್ಡಿ ದರದಲ್ಲಿ ಮಂಜೂರು ಮಾಡಿದ್ದು, ಈ ಪೈಕಿ 737 ಸಂಘಗಳಿಗೆ ರೂ.197.03 ಕೋಟಿಗಳನ್ನು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಬಿಡುಗಡೆ ಮಾಡಿವೆ. |
| ಆ) | ರಾಜ್ಯ ಸರ್ಕಾರವು ಕೇಂದ್ರ ಸರ್ಕಾರ ಸ್ಥಾಪಿಸಲು ಉದ್ದೇಶಿಸಿರುವ ರಾಷ್ಟ್ರೀಯ ಸಹಕಾರ ದತ್ತಾಂಶ ( National Co-operative Data Base) ಯೋಜನೆಯಲ್ಲಿ ಭಾಗಿಯಾಗಿದೆಯೇ; ( ಹಾಗಿದ್ದಲ್ಲಿ ಪೂರ್ಣ ಮಾಹಿತಿ ನೀಡುವುದು) | ಸಹಕಾರ ಮಂತ್ರಾಲಯ, ಕೇಂದ್ರ ಸರ್ಕಾರವು **'ಸಹಕಾರ್ ಸೆ ಸಮೃದ್ಧಿ'** ಧ್ಯೇಯದೊಂದಿಗೆ ಸಹಕಾರ ಕ್ಷೇತ್ರದ ಬೆಳವಣಿಗೆಯಲ್ಲಿ ಇರುವ ತೊಡಕುಗಳನ್ನು ನಿವಾರಿಸಲು ಮತ್ತು ಸಾಮರ್ಥ್ಯವನ್ನು ಗುರುತಿಸಲು ಎಲ್ಲಾ ಸಹಕಾರ ಸಂಘಗಳ ಮಾಹಿತಿಯನ್ನು ಒಂದೆಡೆ ಕ್ರೋಢೀಕರಿಸಲು National Cooperative data base ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ. ಈ ಯೋಜನೆಯಲ್ಲಿ ಇಲಾಖೆಯು ಭಾಗವಹಿಸಿದ್ದು, ಮೊದಲನೇ ಹಂತದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು , ಹಾಲು ಉತ್ಪಾದಕ ಸಹಕಾರ ಸಂಘಗಳು ಹಾಗೂ ಮೀನುಗಾರರ ಸಹಕಾರ ಸಂಘಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಅಳವಡಿಸಲು ಕ್ರಮವಹಿಸಲಾಗಿದೆ. ಎರಡನೇ ಹಂತದಲ್ಲಿ ಗೃಹ ನಿರ್ಮಾಣ ಸಹಕಾರ ಸಂಘಗಳು, T.A.P.C.M.S. ಹಾಗೂ ಇತರೆ ಸಹಕಾರ ಸಂಘಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಅಳವಡಿಸಲು |

| | | |
|---|---|---|
| | | ಕ್ರಮವಹಿಸಲಾಗುತ್ತಿದ್ದು, ಈ ಪ್ರಕ್ರಿಯೆ ಪ್ರಗತಿಯ ಹಂತದಲ್ಲಿರುತ್ತದೆ. |
| ಇ) | ರಾಜ್ಯ ಸರ್ಕಾರಕ್ಕೆ ಈ ಯೋಜನೆಯಡಿ ಸರ್ಕಾರದಿಂದ ದೊರೆತಿರುವ ಅನುದಾನವೆಷ್ಟು ಮತ್ತು ಅನುದಾನದಲ್ಲಿ ಎಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ;<br>(ಕಾರ್ಯಕ್ರಮವಾರು ಮತ್ತು ವರ್ಷಾವಾರು ಪೂರ್ಣ ವಿವರ ನೀಡುವುದು) | ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಗಣಕೀಕರಣ ಯೋಜನೆಯಲ್ಲಿ ಮೊದಲನೇ ಕಂತಿನಲ್ಲಿ ಕೇಂದ್ರ ಸರ್ಕಾರವು ರೂ. 40.25 ಕೋಟಿ ಮತ್ತು ರಾಜ್ಯ ಸರ್ಕಾರವು ರೂ. 26.84 ಕೋಟಿ ಹೀಗೆ ಒಟ್ಟು ರೂ. 67.09 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಹಾರ್ಡ್‌ವೇರ್‌ಗಳಾದ Desktop UPS, MFD( Printer, Scanner, Copier) , VPN, Biometric ಖರೀದಿಸಲು GEM Portal ನಲ್ಲಿ ಟೆಂಡರ್ ಪ್ರಕಟಿಸಿದ್ದು, ಹಾರ್ಡ್‌ವೇರ್ ಸಂಗ್ರಹಿಸಿದ ನಂತರ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗುವುದು. |

**ಸಂಖ್ಯೆ: ಸಿಒ 134 ಸಿಎಲ್‌ಎಸ್ 2023**

K. N. Rajanna

**(ಕೆ.ಎನ್.ರಾಜಣ್ಣ)**
ಸಹಕಾರ ಸಚಿವರು